ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ,-590001

OFFICE OF THE DEPUTY COMMISSIONER, BELAGAVI DISTRICT, BELAGAVI -590001

ದೂರವಾಣಿ/Telephone: 0831- 2407200, 2407273 Email: deo.belagavi@gmail.com

ಸಂ: ಸಿಎಎಲ್/ವಿವ-21/2025-26 ದಿನಾಂಕ: 24.06.2025

ವಿಷಯ: ಬೆಳಗಾವಿ ಜಿಲ್ಲೆಯ ಬೆಳಗಾವಿ ಮತ್ತು ಖಾನಾಪೂರ ತಾಲ್ಲೂಕುಗಳಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳು, ಪದವಿ ಪೂರ್ವ ಕಾಲೇಜುಗಳು ಮತ್ತು ಅಂಗನವಾಡಿಗಳಿಗೆ ರಜೆ ಘೋಷಿಸುವ ಕುರಿತು.

ಉಲ್ಲೇಖ: 1. Karnataka State Forecast Issued by IMD at 01-00 Hours IST of 24.06.2025.
2. ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್)
3. ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ) ಇವರ ಪತ್ರ ಸಂ: ಆಶಾ/ಉನಿ/ ಶಾರ/2024-25 ದಿನಾಂಕ: 24.06.2025.

*******

**ಪ್ರಸ್ತಾವನೆ:**

ಭಾರತೀಯ ಹವಮಾನ ಇಲಾಖೆ (IMD), ಬೆಂಗಳೂರು ರವರು ಬೆಳಗಾವಿ ಜಿಲ್ಲೆಯಲ್ಲಿ ದಿನಾಂಕ: 25.06.2025 ರಂದು ಭಾರಿ ಮಳೆಯಾಗುವ ಸೂಚನೆ (ಆರೇಂಜ್ ಅಲರ್ಟ್)ನ್ನು ಉಲ್ಲೇಖ (1) ರನ್ವಯ ನೀಡಿರುತ್ತಾರೆ. ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ) ರವರು ಧಾರಕಾರವಾಗಿ ಮಳೆಯಾಗುತ್ತಿರುವುದರಿಂದ ಮಕ್ಕಳ ಹಿತದೃಷ್ಟಿಯಿಂದ ದಿನಾಂಕ: 25.06.2025 ರಂದು ಬೆಳಗಾವಿ ನಗರ, ಬೆಳಗಾವಿ ಗ್ರಾಮೀಣ ಮತ್ತು ಖಾನಾಪೂರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳಿಗೆ ರಜೆ ನೀಡಲು ವಿನಂತಿಸಿರುತ್ತಾರೆ. ಪ್ರಯುಕ್ತ ದಿನಾಂಕ: 25.06.2025 ರಂದು ಬೆಳಗಾವಿ ನಗರ, ಬೆಳಗಾವಿ ಗ್ರಾಮೀಣ ಮತ್ತು ಖಾನಾಪೂರ ವಲಯದ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ದಿನಾಂಕ: 25.06.2025 ರಂದು ರಜೆ ಘೋಷಿಸುವಂತೆ ವಿನಂತಿಸಿರುತ್ತಾರೆ. ಮುಂದುವರೆದು ಬೆಳಗಾವಿ ಮತ್ತು ಖಾನಾಪೂರ ತಾಲ್ಲೂಕುಗಳ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳು, ಪದವಿ ಪೂರ್ವ ಕಾಲೇಜುಗಳು (12ನೇ ತರಗತಿ ವರೆಗೆ) ಮತ್ತು ಅಂಗನವಾಡಿಗಳಿಗೆ ವಿದ್ಯಾರ್ಥಿಗಳ ಮತ್ತು ಮಕ್ಕಳ ಸುರಕ್ಷತೆಯ ಹಿತದೃಷ್ಟಿಯಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲೆಯ ಬೆಳಗಾವಿ ಮತ್ತು ಖಾನಾಪೂರ ತಾಲೂಕುಗಳಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34(ಎಮ್) ರಡಿ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರಿಗೆ ಪ್ರದತ್ತವಾದ ಅಧಿಕಾರದ ಮೇರೆಗೆ ಬೆಳಗಾವಿ ಜಿಲ್ಲೆಯ ಬೆಳಗಾವಿ ಮತ್ತು ಖಾನಾಪೂರ ತಾಲ್ಲೂಕುಗಳಾದ್ಯಂತ ಎಲ್ಲಾ ಸರ್ಕಾರಿ, ಸರ್ಕಾರಿ ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ (12 ನೇ ತರಗತಿವರೆಗೆ) ಮತ್ತು ಅಂಗನವಾಡಿಗಳಿಗೆ **ದಿನಾಂಕ: 25.06.2025 ರಂದು** ರಜೆ ಘೋಷಿಸುವ ಕುರಿತು ಈ ಕೆಳಗಿನಂತೆ ಆದೇಶ ಮಾಡಿದೆ.

**ಆದೇಶ**

ಈ ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ಮತ್ತು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್) ರಡಿ ಪ್ರದತ್ತವಾದ ಅಧಿಕಾರದ ಮೇರೆಗೆ **ಬೆಳಗಾವಿ ಜಿಲ್ಲೆಯ** ಬೆಳಗಾವಿ ಮತ್ತು ಖಾನಾಪೂರ ತಾಲ್ಲೂಕುಗಳಾದ್ಯಂತ ಎಲ್ಲಾ ಸರ್ಕಾರಿ, ಸರ್ಕಾರಿ ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ (12 ನೇ ತರಗತಿವರೆಗೆ) ಮತ್ತು ಅಂಗನವಾಡಿಗಳಿಗೆ **ಮುಂಜಾಗೃತ ಕ್ರಮವಾಗಿ ದಿನಾಂಕ: 25.06.2025 ರಂದು ರಜೆ ಘೋಷಿಸಿ ಆದೇಶಿಸಿದೆ.**

ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಹಾಗೂ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಬೆಳಗಾವಿ ರವರು ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಈ ರಜಾ ಅವಧಿಯನ್ನು ಮುಂದಿನ ದಿನಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದು.

**ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ಬೆಳಗಾವಿ ಜಿಲ್ಲೆ ಬೆಳಗಾವಿ**

Scanned with OKEN Scanner

**ಪ್ರತಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ :**

1. ಪೊಲೀಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ
2. ಪೋಲಿಸ್ ಅಧೀಕ್ಷಕರು, ಬೆಳಗಾವಿ
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ, ಬೆಳಗಾವಿ
4. ಉಪವಿಬಾಗಾಧಿಕಾರಿಗಳು, ಬೆಳಗಾವಿ
5. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ
6. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ
7. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಳಗಾವಿ
8. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೆಳಗಾವಿ ರವರಿಗೆ ಸರ್ಕಾರಕ್ಕೆ ವೆಚ್ಚ ಬಾರದ ರೀತಿಯಲ್ಲಿ ಸ್ಥಳೀಯ ಸುದ್ದಿ ಮಾಧ್ಯಮಗಳಲ್ಲಿ ಪ್ರಕಟಿಸುವ ಕುರಿತು.
9. ತಹಶೀಲ್ದಾರ ಬೆಳಗಾವಿ/ಖಾನಾಪೂರ

**ಅಪರ ಜಿಲ್ಲಾಧಿಕಾರಿ,**
**ಬೆಳಗಾವಿ ಜಿಲ್ಲೆ, ಬೆಳಗಾವಿ**

Scanned with OKEN Scanner